**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ರವರು ನಿಯಮ 72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ</u> ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರ ಉತ್ತರ:**

ಪ್ರಶ್ನೆ

ವಿಷಯ: ನ್ಯಾಯಮೂರ್ತಿ ಭಕ್ತವತ್ಸಲ ಆಯೋಗದ ಶಿಫಾರಸ್ಸಿನಲ್ಲಿನ ಅಂಶಗಳ ಅನುಷ್ಠಾನ ಮಾಡುವಲ್ಲಿ ಆಗಿರುವ ಗೊಂದಲಗಳು, ಮೇಯರ್ ಮತ್ತು ಉಪಮೇಯರ್ ಅವಧಿ ವಿಸ್ತರಣೆ ಹಾಗೂ ನಗರ ಸ್ಥಳೀಯಾಡಳಿತ ಚುನಾವಣೆಯನ್ನು ಸಕಾಲದಲ್ಲಿ ನಡೆಸುವುದು ಮತ್ತು ಎರಡನೇ ಅವಧಿಯಲ್ಲಿ ಅಧ್ಯಕ್ಷ-ಉಪಾಧ್ಯಕ್ಷರ ಮೀಸಲಾತಿ ನಿರ್ಧಾರವಾಗದೆ ಖಾಲಿ ಇದ್ದ ಸಂದರ್ಭದಲ್ಲಿ ಸದಸ್ಯರ ಅವಧಿಯನ್ನು ಹೆಚ್ಚಳ ಮಾಡುವುದು ಸೇರಿದಂತೆ ಇನ್ನಿತರ ವಿಷಯಗಳ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

**<u>ಉತ್ತರ</u>**

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ|| ಜಸ್ಟೀಸ್ ಕೆ. ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿದ್ದು ಈ ಕೆಳಕಂಡ ಅಂಶಗಳ ಬಗ್ಗೆ ತೀರ್ಮಾನ ತೆಗೆದುಕೊಂಡಿರುತ್ತದೆ.

I. To continue to provide the policy of Political Reservation of 1/3rd (33%) of total seats, in the ensuing Urban and Local Bodies Elections, in favour of OBCs, as per the present classification of OBCS as "Backward Classes" Category-A and B and the aggregate of reservation of seats in favour of scheduled castes, scheduled tribes and Backward Classes shall not exceed 5o% of total seats;
   a. To consider providing reservation of office of the Mayor and the Deputy Mayor in BBMP in favour of persons belonging to Other Backward Classes;

II. To bring all Urban and Local Bodied Election wing under the control of DPAR;

ಪ್ರಸ್ತುತ ಮೈಸೂರು ಮತ್ತು ಶಿವಮೊಗ್ಗ ಮಹಾನಗರ ಪಾಲಿಕೆಗಳಲ್ಲಿ ಚುನಾಯಿತ ಆಡಳಿತ ಮಂಡಳಿಯ ಅವಧಿಯು ಮುಕ್ತಾಯಗೊಂಡಿದ್ದು, ಹೊಸದಾಗಿ ವಾರ್ಡುವಾರು ಮೀಸಲಾತಿ ನಿಗಧಿಪಡಿಸಿ ಚುನಾವಣೆ ನಡೆಸಬೇಕಾಗಿರುತ್ತದೆ. ಅಲ್ಲಿಯವರೆಗೆ ಅವಧಿ ಮುಕ್ತಾಯಗೊಂಡಿರುವುದರಿಂದ ಸುಗಮ ಆಡಳಿತದ ದೃಷ್ಟಿಯಿಂದ ಸಂಬಂಧಪಟ್ಟ ವಿಭಾಗಾಧಿಕಾರಿಗಳನ್ನು ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಲಾಗಿರುತ್ತದೆ. ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ಸೆಕ್ಷನ್-10 ರನ್ವಯ ಮೇಯರ್ ಮತ್ತು ಉಪಮೇಯರ್ ಸ್ಥಾನಗಳ ಅವಧಿಯು 01 ವರ್ಷವಾಗಿದ್ದು, ಅವಧಿ ವಿಸ್ತರಣೆಗೆ ಅವಕಾಶ ಇರುವುದಿಲ್ಲ.

...2

ಅಧ್ಯಕ್ಷ/ ಉಪಾಧ್ಯಕ್ಷರ ಮೀಸಲಾತಿ ನಿಗಧಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ;-

1) ಮಾನ್ಯ ಸರ್ವೋಚ್ಛ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ|| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಲು ಅನುಮೋದನೆ ನೀಡಿರುತ್ತದೆ. ಆದ್ದರಿಂದ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

2) ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಛ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿರುತ್ತದೆ. ಪ್ರಕರಣವು ದಿನಾಂಕ:13.12.2023 ರಂದು ವಿಚಾರಣೆಗೆ ಬರಲಿದ್ದು, ಮಾನ್ಯ ಸರ್ವೋಚ್ಛ ನ್ಯಾಯಾಲಯದ ತೀರ್ಪು/ನಿರ್ದೇಶನವನ್ನು ನಿರೀಕ್ಷಿಸಲಾಗಿರುತ್ತದೆ.

ಅಧ್ಯಕ/ಉಪಾಧ್ಯಕ್ಷ ಸ್ಥಾನದ ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್ 42 ರ ಪ್ರಕಾರ ಕೌನ್ಸಿಲರ್‌ಗಳ ಅವಧಿಯು ಚುನಾವಣೆ ನಂತರ ಪ್ರಥಮ ಸಭೆ ನಡೆದ ದಿನಾಂಕದಿಂದ 05 ವರ್ಷಗಳಾಗಿರುವುದರಿಂದ ಸದರಿ ಅವಧಿಯನ್ನು ವಿಸ್ತರಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ.

ಮಾನ್ಯ ಸರ್ವೋಚ್ಛ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಸರ್ಕಾರದಿಂದ ಶೀಘ್ರವಾಗಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಮೀಸಲಾತಿಯು ನಿಗದಿಪಡಿಸಲಾಗುವುದು.

ಸಂಖ್ಯೆ: ನಅಇ 37 ಎಲ್‌ಸಿಕ್ಯೂ 2023

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು